ಕರ್ನಾಟಕ ಸರ್ಕಾರ

(ವಾಣಿಜ್ಯ ತೆರಿಗೆ ಇಲಾಖೆ)

**2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಕಾಯ್ದೆಯ ಪ್ರಕರಣ 59ರ ಉಪ ಪ್ರಕರಣ (4)ರ ಅಡಿ ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರ ನಡವಳಿಗಳು**

ವಿಷಯ: 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಕಾಯ್ದೆಯಡಿ "ಸೋಲಾರ್ ಇನ್‌ವರ್ಟರ್‌ಗಳು ಮತ್ತು ಸೋಲಾರ್ ಪಿ.ವಿ.ಪ್ಯಾನಲ್"ಗಳ ಅಂತರರಾಜ್ಯ ಮಾರಾಟದ ಮೇಲೆ ಅನ್ವಯವಾಗುವ ತೆರಿಗೆ ದರದ ಸ್ಪಷ್ಟೀಕರಣ ಕುರಿತು.

ಉಲ್ಲೇಖ: ಮೆ: ಎಬಿಬಿ ಇಂಡಿಯಾ ಲಿಮಿಟೆಡ್, ಬೆಂಗಳೂರು ಇವರ ಅರ್ಜಿ ದಿನಾಂಕ 22.01.2016 (ಟಿನ್–29450069265).

* * *

2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಕಾಯ್ದೆಯಡಿಯಲ್ಲಿ ನೋಂದಣಿದಾರರಾದ ಮೆ:ಎಬಿಬಿ ಇಂಡಿಯಾ ಲಿಮಿಟೆಡ್, ನಂ.26/1, 21ನೇ ಮಹಡಿ, ವರ್ಲ್ಡ್ ಟ್ರೇಡ್ ಸೆಂಟರ್, ಬ್ರಿಗೇಡ್ ಗೇಟ್‌ವೇ, ಡಾ:ರಾಜ್‌ಕುಮಾರ್ ರಸ್ತೆ, ಮಲ್ಲೇಶ್ವರಂ ವೆಸ್ಟ್, ಬೆಂಗಳೂರು – 560 055 ಇವರು ಮೇಲ್ಕಂಡ ಅರ್ಜಿಯಲ್ಲಿ "ಸೋಲಾರ್ ಇನ್‌ವರ್ಟರ್‌ಗಳು ಮತ್ತು ಸೋಲಾರ್ ಪಿ.ವಿ.ಪ್ಯಾನಲ್"ಗಳ ಅಂತರರಾಜ್ಯ ಮಾರಾಟದ ಮೇಲೆ ಅನ್ವಯವಾಗುವ ತೆರಿಗೆ ದರದ ಬಗ್ಗೆ ಸ್ಪಷ್ಟೀಕರಣವನ್ನು ಕೋರಿರುತ್ತಾರೆ.

2. 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಕಾಯ್ದೆಯ ಪ್ರಕರಣ 59ರ ಉಪ ಪ್ರಕರಣ (4)ರ ಮೇರೆಗೆ ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರು ತೆರಿಗೆಯ ಕರನಿರ್ಧರಣೆ ಹಾಗೂ ರಾಜಸ್ವದ ಸಂಗ್ರಹಣೆ ಕಾರ್ಯದಲ್ಲಿ ಏಕರೂಪತೆಯನ್ನು ತರುವ ಉದ್ದೇಶಕ್ಕಾಗಿ, ಸದರಿ ಕಾಯ್ದೆಯಡಿಯಲ್ಲಿ ತೆರಿಗೆಗೆ ಒಳಪಡುವ ಸರಕುಗಳ ಸಂಬಂಧದಲ್ಲಿ ಈ ಅಧಿನಿಯಮದ ಅಡಿಯಲ್ಲಿ ಸಂದಾಯ ಮಾಡತಕ್ಕ ತೆರಿಗೆ ದರವನ್ನು ಸ್ಪಷ್ಟಪಡಿಸುವುದು ಅವಶ್ಯವೆಂದು ಅಥವಾ ಯುಕ್ತವೆಂದು ಭಾವಿಸಿದರೆ ಹಾಗೆ ಮಾಡಲು ಅಧಿಕಾರ ಹೊಂದಿದ್ದಾರೆ.

ಅರ್ಜಿದಾರರು ಕೋರಿರುವ ಸ್ಪಷ್ಟೀಕರಣವು ಮೇಲೆ ನಮೂದಿಸಿದ ಉಪಬಂಧದ ವ್ಯಾಪ್ತಿಗೊಳಪಡುವುದರಿಂದ ತೆರಿಗೆ ದರದ ಬಗ್ಗೆ ಸ್ಪಷ್ಟಪಡಿಸುವುದು ಸದರಿ ಉಪಬಂಧದ ಉದ್ದೇಶ ಸಾಧನೆಗಾಗಿ ಅವಶ್ಯವೆಂದು ಮನವರಿಕೆಯಾಗಿದೆ.

3. ಈ ಹಿನ್ನೆಲೆಯಲ್ಲಿ ತೆರಿಗೆ ದರವನ್ನು ಈ ಕೆಳಕಂಡಂತೆ ಸ್ಪಷ್ಟಪಡಿಸಲಾಗಿದೆ.

<u>ಸ್ಪಷ್ಟೀಕರಣ ಸಂಖ್ಯೆ: ಸಿಎಲ್‌ಆರ್/ಸಿಆರ್–141/2015–16 ದಿನಾಂಕ 04.03.2016</u>

ನೋಂದಾಯಿತ ಅಥವಾ ನೋಂದಾಯಿತರಲ್ಲದ ವ್ಯಾಪಾರಿಗಳಿಗೆ "ಸೋಲಾರ್ ಇನ್‌ವರ್ಟರ್‌ಗಳು ಮತ್ತು ಸೋಲಾರ್ ಪಿ.ವಿ.ಪ್ಯಾನಲ್"ಗಳ ಅಂತರರಾಜ್ಯ ಮಾರಾಟ ಮಾಡಿದಾಗ ಸರ್ಕಾರದ ಅಧಿಸೂಚನೆ ಸಂಖ್ಯೆ:ಎಫ್‌ಡಿ 71 ಸಿಎಸ್‌ಎಲ್ 2015 ದಿನಾಂಕ 01.08.2015ರ ಅನ್ವಯ ತೆರಿಗೆ ವಿನಾಯಿತಿಗೆ ಒಳಪಡುತ್ತದೆ ಎಂದು ಈ ಮೂಲಕ ಸ್ಪಷ್ಟೀಕರಿಸಲಾಗಿದೆ.

(ರಿತ್ವಿಕ್ ಪಾಂಡೆ)
ವಾಣಿಜ್ಯ ತೆರಿಗೆಗಳ ಆಯುಕ್ತರು,
(ಕರ್ನಾಟಕ), ಬೆಂಗಳೂರು

ವಾಣಿಜ್ಯ ತೆರಿಗೆಗಳ ಆಯುಕ್ತರು
ಕರ್ನಾಟಕ, ಬೆಂಗಳೂರು